ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE 11/2/2020

# ಶಾಸಕ ರಿಜ್ವಾನ್ ಅರ್ಷದ್ ಪ್ರಮಾಣ ವಚನ ಸ್ವೀಕಾರ



ರಿಜ್ವಾನ್ ಅರ್ಷದ್ ಸತ್ಯ ಮತ್ತು ನಿಷ್ಠೆ ಹೆಸರಿನಲ್ಲಿ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು.

**ಬೆಂಗಳೂರು:** ಉಪಚುನಾವಣೆಯಲ್ಲಿ ಶಿವಾಜಿನಗರ ಕ್ಷೇತ್ರದ ಶಾಸಕರಾಗಿ ಗೆಲುವು ಸಾಧಿಸಿರುವ ಕಾಂಗ್ರೆಸ್‌ನ ರಿಜ್ವಾನ್ ಅರ್ಷದ್ ಸೋಮವಾರ ನೂತನ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು. ವಿಧಾನಸಭೆ ಸ್ಪೀಕರ್ ಕಚೇರಿಯಲ್ಲಿ ನಡೆದ ಪ್ರಮಾಣ ವಚನ ಕಾರ್ಯಕ್ರಮದಲ್ಲಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ನೂತನ ಶಾಸಕರಿಗೆ ಪ್ರಮಾಣ ವಚನ ಬೋಧಿಸಿದರು. ರಿಜ್ವಾನ್ ಅರ್ಷದ್ ಸತ್ಯ ಮತ್ತು ನಿಷ್ಠೆ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ಮಾಜಿ ಸಚಿವ ಕೃಷ್ಣ ಬೈರೇಗೌಡ, ಶಾಸಕ ಎನ್.ಎ.ಹ್ಯಾರಿಸ್ ಮತ್ತು ರಿಜ್ವಾನ್ ಕುಟುಂಬದ ಸದಸ್ಯರು ಹಾಜರಿದ್ದರು. ಶಿವಾಜಿನಗರ, ಕ್ಷೇತ್ರದಿಂದ ಕಾಂಗ್ರೆಸ್‌ನಿಂದ ಶಾಸಕರಾಗಿದ್ದ ರೋಷನ್ ಬೇಗ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ಈ ಕ್ಷೇತ್ರಕ್ಕೆ ಉಪಚುನಾವಣೆ ನಡೆದಿತ್ತು. ಆದರೆ, ಉಪ ಚುನಾವಣೆಯಲ್ಲಿ ರೋಷನ್ ಬೇಗ್ ಅವರಿಗೆ ಬಿಜೆಪಿ ಟಿಕೆಟ್ ನೀಡದ ಹಿನ್ನೆಲೆಯಲ್ಲಿ ಅವರು ಸ್ಪರ್ಧಿಸಿರಲಿಲ್ಲ. ಬಿಜೆಪಿ ಶರವಣ ಅವರಿಗೆ ಟಿಕೆಟ್ ನೀಡಿತ್ತು. ಚುನಾವಣೆಯಲ್ಲಿ ವಿಧಾನ ಪರಿಷತ್ ಸದಸ್ಯರೂ ಆಗಿರುವ ರಿಜ್ವಾನ್ ಅರ್ಷದ್ ಗೆಲುವು ಪಡೆದಿದ್ದರು.